**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 827/2018** **CW-4** **PW-4**

**ಸಾಕ್ಷಿಯನ್ನು ದಿಃ 20.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಮಂಜೇಗೌಡ |
| ತಂದೆಯ ಹೆಸರುಃ | ಮೇಡಪ್ಪ |
| ವಯಸ್ಸುಃ | 58 ವರ್ಷ |
| ವೃತ್ತಿಃ | ಆಟೋ ಚಾಲಕ |
| ವಾಸ ಸ್ಥಳಃ | ಗೂರನಹಳ್ಳಿ ಮಂಡಿ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ 1 ಮತ್ತು ಚಾಸಾ-2 ರವರ ಪರಿಚಯವಿದೆ.

ದಿಃ 17.03.2018 ರಂದು ಬೆಳಗ್ಗೆ 10.30 ರ ಸಮಯದಲ್ಲಿ ಆರೋಪಿ ಚಾಸಾ-1 ರವರೊಂದಿಗೆ ಜಗಳವಾಡುತ್ತ ಚಾಸಾ-1 ರವರ ಬಳಿ ಇದ್ದ ಮಗುವನ್ನು ಕಿತ್ತುಕೊಳ್ಳಲು ಪ್ರಯತ್ನಿಸುತ್ತಿದ್ದು, ಚಾಸಾ-1 ರವರ ಗಂಡ ಕಲ್ಲಿನಿಂದ ಚಾಸಾ-1 ರವರ ಬೆನ್ನಿಗೆ ಹೊಡೆದಿರುತ್ತಾರೆ. ಕೈಯಿಂದ ಕಪಾಳಕ್ಕೆ ಹೊಡೆದಿರುತ್ತಾರೆ. ಆಗ ಆರೋಪಿ ಕೈಯಿಂದ ಚಾಸಾ-2 ರವರ ಮೈಕೈಗೆ ಹೊಡೆದಿರುತ್ತಾರೆ. ನಾನು ಮತ್ತು ಚಾಸಾ-3 ರವರು ಜಗಳ ಬಿಡಿಸಿರುತ್ತೇವೆ. ನಂತರ ನಾನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. 1 ವಾರದ ನಂತರ ಪೋಲೀಸ್ ಠಾಣೆಯಲ್ಲಿ ಹೇಳಿಕೆ ನೀಡಿರುತ್ತೇನೆ .

ಸಾಕ್ಷಿಗೆ ಸ್ಥಳ ಮತ್ತು ಅಮಾನತ್ತು ಮಹಜರ್ ಅನ್ನು ತೋರಿಸಲಾಗಿ, ಅದನ್ನು ಅವರು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಒಂದು ವಾರದ ನಂತರ ಪೋಲೀಸ್ ಠಾಣೆಯಲ್ಲಿ

ಮಾಡಿರುತ್ತೇನೆ. ಸಾಕ್ಷಿ ಮು ಮಾ 1 ನ್ನು ಗುರುತಿಸಿರುವುದಿಲ್ಲ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ-1 ರವರ ಗಂಡನ ಹೆಸರು ರವಿಕುಮಾರ್ ಎಂದರೆ ಸರಿ. ಅವರಿಬ್ಬರ ನಡುವೆ ಕೌಟುಂಬಿಕ ಕಲಹ ಇದ್ದು ಕೌಟುಂಬಿಕ ನ್ಯಾಯಾಲಯದಲ್ಲಿ ಪ್ರಕರಣಗಳು ಇವೆ ಎಂದರೆ ಸರಿ. ಆರೋಪಿ ಚಾಸಾ-1 ರವರನ್ನು ಕುರಿತು ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿ. ಆರೋಪಿ ಚಾಸಾ-1 ರವರ ಕೈಯಿಂದ ಮೈಕೈ ಮೇಲೆ ಹೊಡೆದಿರುತ್ತಾರೆ ಎಂದರೆ ಸರಿ. ಚಾಸಾ-2 ರವರನ್ನು ನೆಲಕ್ಕೆ ಬೀಳಿಸಿ ಕಾಲಿನಿಂದ ಒದ್ದಿರುತ್ತಾರೆ ಎಂದರೆ ಸರಿ. ಪ್ರಾಣ ಬೆದರಿಕೆ ಸಹ ಹಾಕಿರುತ್ತಾರೆ ಎಂದರೆ ಸರಿ. ಈ ಸಂಬಂಧ ನಾನು ಪೋಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿ.

ಮು ಮಾ 1 ರಿಂದ ಆರೋಪಿ ಚಾಸಾ-1 ರವರಿಗೆ ಹೊಡೆರದಿರುತ್ತಾರೆ ಎಂದರೆ ಗೊತ್ತಿಲ್ಲ. ದಿಃ 04.04.2018 ರಂದು ಬೆಳಗ್ಗೆ 10.00 ರಿಂದ 1.30 ರ ಸಮಯದಲ್ಲಿ ಪೋಲೀಸರು ಸ್ಥಳಕ್ಕೆ ಬಂದು ಮಹಜರ್ ಕ್ರಮ ಜರುಗಿಸಿದ್ದು ಚಾಸಾ-1 ರವರು ಸ್ಥಳವನ್ನು ತೋರಿಸಿರುತ್ತಾರೆ ಎಂದರೆ ಸರಿ. ಮಹಜರ್ ಸಮಯದಲ್ಲಿ ಚಾಸಾ-1 ರವರು ಮು ಮಾ 1 ನ್ನು ಪೋಲೀಸರಿಗೆ ನೀಡಿರುತ್ತಾರೆ ಎಂದರೆ ಸರಿ. ಸ್ಥಳದಲ್ಲಿ ಮಾಡಿರುತ್ತೇನೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಎನ್ ಆರ್ ರವರಿಂದ ಃ**

ಚಾಸಾ-1 ರವರು ನಮ್ಮ ಮನೆಯ ಪಕ್ಕದ ಮನೆಯವರು. ಯಾವ ವಿಚಾರಕ್ಕೆ ಗಲಾಟೆ ಆಗಿರುತ್ತದೆ ಎಂದು ಗೊತ್ತಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದು ಮಗುವಿನ ವಿಚಾರವಾಗಿ ಗಲಾಟೆ ಆಗುತ್ತಿತ್ತು ಎಂದು ಹೇಳಿದರು. ನಾನು ಕಣ್ಣಾರೆ ನೋಡಿಲ್ಲ. 2018 ರಿಂದ ಚಾಸಾ-1 ರವರ ಮಗು

ಆರೋಪಿಯ ಬಳಿ ಇದೆ  ಎಂದರೆ ಸರಿ. ಚಾಸಾ–1 ರವರು ಜೀವನಾಂಶಕ್ಕಾಗಿ ಅರ್ಜಿ ಸಲ್ಲಿಸಿರುವುದು ನನಗೆ ಗೊತ್ತಿಲ್ಲ. ಚಾಸಾ–1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮಗುವಿನ ವಿಚಾರವಾಗಿ ಗಲಾಟೆ ಆಗಿರುತ್ತದೆ ಎಂದು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆಗ ಸುಮಾರು 5–6 ಜನ ಬಂದಿದ್ದರು. ಆಗ ಆರೋಪಿ ಒಬ್ಬರು ಇದ್ದರು. ಹಲ್ಲೆ ಮಾಡಿರುವುದನ್ನು ನಾನು ನೋಡಿಲ್ಲ ಎಂದರೆ ಸರಿಯಲ್ಲ. ಆರೋಪಿ ಚಾಸಾ–1 ರವರ ಜುಟ್ಟನ್ನು ಹಿಡಿದುಕೊಂಡು ಕಪಾಳಕ್ಕೆ ಹೊಡೆದಿರುತ್ತಾರೆ. ಈ ಅಂಶವನ್ನು ನಾನು ನನ್ನ ಹೇಳಿಕೆಯಲ್ಲಿ ಹೇಳಿದ್ದೇನೆ. ಆರೋಪಿ ಚಾಸಾ–1 ರವರ ಮೇಲೆ ಯಾವುದೇ ಹಲ್ಲೆ ಮಾಡಿಲ್ಲ ಎಂದರೆ ಸರಿಯಲ್ಲ. ಮು ಮಾ –1 ನ್ನು ಪೋಲೀಸರಿಗೆ ಯಾರು ಕೊಟ್ಟಿದ್ದರು ಎಂದು ಗೊತ್ತಿಲ್ಲ. ಇದೇ ಕಲ್ಲಿನಿಂದ ಹೊಡೆದಿರುವುದು ಗೊತ್ತಿಲ್ಲ. ಹೇಳಿಕೆಯಲ್ಲಿ ಏನು ಬರೆದುಕೊಂಡಿದ್ದಾರೆ ಎಂದು ಗೊತ್ತಿಲ್ಲ  ಎಂದರೆ ಸರಿ. ಪೋಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿದ್ದೇನೆ ಎಂದರೆ ಸರಿ.

**ಮರು ವಿಚಾರಣೆ ಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ .)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**